# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

ಸೋಮವಾರ, ದಿನಾಂಕ:23ನೇ ಮಾರ್ಚ್, 2026

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

*****

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

ಆ) ತಡೆಹಿಡಿಯಲಾದ ಪ್ರಶ್ನೆ:
10ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಕಿಶೋರ್ ಕುಮಾರ್ ಪುತ್ತೂರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:148(1321) } ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

## 2. ಶೂನ್ಯವೇಳೆ ಪ್ರಸ್ತಾವಗಳು

## 3. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಸಿ.ಟಿ. ರವಿ** ಅವರು ವಿವಿಧ ಇಲಾಖೆಗಳಲ್ಲಿ ಕಾಮಗಾರಿಯನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಬಾಕಿಯಿರುವ ಹಣವನ್ನು ಬಿಡುಗಡೆ ಮಾಡುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

2. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ಪುಟ್ಟಣ್ಣ, ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) ಹಾಗೂ ಎಸ್.ಎಲ್. ಭೋಜೇಗೌಡ** ಅವರುಗಳು ರಾಜ್ಯದ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ತಾಂತ್ರಿಕೇತರ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಉಪನ್ಯಾಸಕರು ಮತ್ತು ಸಿಸ್ಟಮ್ ಅನಾಲಿಸ್ಟ್‌ಗಳಿಗೆ A.I.C.T.E ವೇತನ ನೀಡಿ, ಅದೇ "ಸಿ" ವೃಂದದ ಗ್ರಂಥಪಾಲಕರುಗಳಿಗೆ A.I.C.T.E ವೇತನ ನೀಡದೆ ತಾರತಮ್ಯ ಮಾಡುತ್ತಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ** ಸಚಿವರ ಗಮನ ಸೆಳೆಯುವುದು.

3. **ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರು ಚಪ್ಪರಬಂದ, ಗೌಳಿ, ಕಾಡುಗೊಲ್ಲ, ಕುಡುಬಿ, ಕಂಜರಬಾಟ ಈ ಐದು ಸಮುದಾಯಗಳನ್ನು ಅಲೆಮಾರಿ, ಅರೆ-ಅಲೆಮಾರಿ ಜನಾಂಗಗಳು ಎಂದು ಘೋಷಿಸುವ ಬಗ್ಗೆ **ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ** ಸಚಿವರ ಗಮನ ಸೆಳೆಯುವುದು.

4. **ಶ್ರೀ ಗೋವಿಂದರಾಜು** ಅವರು ದೀರ್ಘಾವಧಿ ವಿದ್ಯುತ್ ಖರೀದಿ ಒಪ್ಪಂದದಂತೆ ವೆಚ್ಚ ಹಾಗೂ ರಾಜ್ಯ ಸರ್ಕಾರ ಭರಿಸುತ್ತಿರುವ ಮೊತ್ತಕ್ಕೂ ವ್ಯತ್ಯಾಸವಿರುವುದರಿಂದಾಗಿ ವಿದ್ಯುತ್ ಸರಬರಾಜು ಕಂಪನಿಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಬಗ್ಗೆ **ಮಾನ್ಯ ಇಂಧನ** ಸಚಿವರ ಗಮನ ಸೆಳೆಯುವುದು.

5. **ಶ್ರೀ ಸುನೀಲ್‌ಗೌಡ ಪಾಟೀಲ್** ಅವರು ಹೆಬ್ಬಾಳದಲ್ಲಿರುವ ವಿದ್ಯುತ್ ಚಿತಾಗಾರದಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಪರಿಣಾಮ ಉಂಟಾಗುತ್ತಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

## 4. ನಿಯಮ 330ರ ಮೇರೆಗೆ

1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಸಿ.ಟಿ. ರವಿ, ಡಾ: ತಳವಾರ್ ಸಾಬಣ್ಣ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಇತರರು** ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು, ನಿಗಮ/ಮಂಡಳಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡದೇ, ರಾಜ್ಯ ಸರ್ಕಾರವು ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಗಳು)**

2. **ಡಾ: ಕೆ. ಗೋವಿಂದರಾಜ್** ಅವರು ಬೆಂಗಳೂರಿನ ಸುತ್ತಮುತ್ತಲಿನ 110 ಹಳ್ಳಿಗಳ ಸರ್ವತೋಮುಖ ಬೆಳವಣಿಗೆಗೆ ಬಿ.ಬಿ.ಎಂ.ಪಿ ಮತ್ತು ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡಿದ್ದರೂ ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಉಪ ಮುಖ್ಯಮಂತ್ರಿಗಳು)**

3. **ಶ್ರೀ ಪುಟ್ಟಣ್ಣ ಹಾಗೂ ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರುಗಳು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ 2002 ಮತ್ತು 2025ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಮಾಡಲು ಬಿ.ಎಲ್.ಓ.ಗಳಾಗಿ ಹಾಗೂ ಮನೆ ಮನೆ ಸಮೀಕ್ಷೆಗೆ ಪ್ರೌಢ ಶಾಲಾ ಶಿಕ್ಷಕರನ್ನು ಹೊರತುಪಡಿಸಿ ಇತರೆ ಇಲಾಖೆಗಳ ಸಿಬ್ಬಂದಿಯನ್ನು ನಿಯೋಜಿಸುವ ಕುರಿತು **ಪ್ರಸ್ತಾಪಿಸುವುದು.** (**ಮಾನ್ಯ ಉಪ ಮುಖ್ಯಮಂತ್ರಿಗಳು**)

4. **ಡಾ: ತಳವಾರ್ ಸಾಬಣ್ಣ** ಅವರು ಗಡಿನಾಡು ಮತ್ತು ಹೊರನಾಡು ಕನ್ನಡಿಗರ ಹಿತಾಸಕ್ತಿ ಕಾಪಾಡಲು ಹಾಗೂ ಶಿಕ್ಷಣ ಮತ್ತು ಉದ್ಯೋಗ ಅವಕಾಶ ಕಲ್ಪಿಸುವ ಕುರಿತು **ಪ್ರಸ್ತಾಪಿಸುವುದು. (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು)**

5. **ಶ್ರೀಮತಿ ಹೇಮಲತಾ ನಾಯಕ** ಅವರು ರಾಜ್ಯದಲ್ಲಿ ಮಾಜಿ ದೇವದಾಸಿಯರು ಮತ್ತು ಅವರ ಮಕ್ಕಳ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಯ ಸುಧಾರಣೆಯ ಕುರಿತು **ಪ್ರಸ್ತಾಪಿಸುವುದು. (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು)**

## 5. ವಿತ್ತೀಯ ಕಾರ್ಯಕಲಾಪ

2026-27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

(ಏಳನೇ ದಿನ)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council/council.htm**